**All India Radio: Bangalore**
**Regional Bulletin In Kannada**
**27.12.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.12.2025 / 2.30 p.m.**
**<><><><>**

ಮುಖ್ಯಾಂಶಗಳು

1. ವಾಹನ ಸಂಚಾರ ಕುರಿತು ರಾಷ್ಟ್ರೀಯ ಮಾರ್ಗಸೂಚಿ ರೂಪಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ರಾಜ್ಯ ಸರ್ಕಾರ ನಿರ್ಧಾರ
2. ನಕಲಿ ದಾಖಲೆ ಸೃಷ್ಟಿಸಿ ಅರಣ್ಯ ಭೂಕಬಳಿಕೆ ವಿರುದ್ಧ ಕಠಿಣ ಕ್ರಮಕ್ಕೆ ಸಚಿವ ಈಶ್ವರ್ ಖಂಡ್ರೆ ಸೂಚನೆ
3. ಜನವರಿ ೩ ರಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕರಡು ಮತದಾರರ ಪಟ್ಟಿ ಪ್ರಕಟ
4. ಮೈಸೂರು ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟ ಪ್ರಕರಣ ; ಸಾವಿನ ಸಂಖ್ಯೆ ಮೂರಕ್ಕೆ ಏರಿಕೆ

<><><><>

ಚಿತ್ರದುರ್ಗದ ಹಿರಿಯೂರು ಸಮೀಪ ಸಂಭವಿಸಿದ ಭೀಕರ ಬಸ್ ದುರಂತದ ಹಿನ್ನೆಲೆಯಲ್ಲಿ ರಾತ್ರಿ ವೇಳೆ ವಾಹನ ಸಂಚರಿಸುವ ಕುರಿತು ಕಟ್ಟುನಿಟ್ಟಿನ ರಾಷ್ಟ್ರೀಯ ಮಾರ್ಗಸೂಚಿಗಳನ್ನು ರೂಪಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಬೆಂಗಳೂರಿನಲ್ಲಿಂದು ಈ ಕುರಿತು ಮಾಹಿತಿ ನೀಡಿದ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ಚಾಲಕರ ಆಯಾಸದಿಂದ ಸಂಭವಿಸುವ ಅಪಘಾತಗಳನ್ನು ತಡೆಗಟ್ಟಲು ಈ ಕ್ರಮ ಅನಿವಾರ್ಯ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸಂಚರಿಸುವ ಟ್ರಕ್, ಲಾರಿ ಹಾಗೂ ಬಸ್‌ಗಳ ಚಾಲಕರು ಮಧ್ಯರಾತ್ರಿ ೧೨ ರಿಂದ ಬೆಳಗಿನಜಾವ ೪ ಗಂಟೆಯವರೆಗೆ ಕನಿಷ್ಠ ೪ ಗಂಟೆಗಳ ಕಾಲ ಕಡ್ಡಾಯವಾಗಿ ವಿಶ್ರಾಂತಿ ಪಡೆಯುವ ನಿಯಮವನ್ನು ಜಾರಿಗೆ ತರುವಂತೆ ಸಚಿವರು ಕೇಂದ್ರಕ್ಕೆ ಮನವಿ ಮಾಡುವುದಾಗಿ ತಿಳಿಸಿದ್ದಾರೆ. ವಿಶೇಷವಾಗಿ ಸರಕು ಸಾಗಾಣೆ ವಾಹನಗಳಿಲ್ಲಿ ಒಬ್ಬರೇ ಚಾಲಕರಿರುವುದರಿಂದ ಉಂಟಾಗುವ ದೈಹಿಕ ದಣಿವು ಮತ್ತು ಅದರಿಂದಾಗುವ ಅಪಾಯಗಳನ್ನು ತಪ್ಪಿಸಲು ಈ ಕ್ರಮ ಸಹಕಾರಿಯಾಗಲಿದೆ ಎಂದು ಸಚಿವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಭೂಮಿಗೆ ಬಂಗಾರದ ಬೆಲೆ ಬಂದಿರುವ ಹಿನ್ನೆಲೆಯಲ್ಲಿ ಕೆಲವರು ನಕಲಿ ದಾಖಲೆ ಸೃಷ್ಟಿಸಿ ಅರಣ್ಯ ಭೂಮಿ ಕಬಳಿಸಲು ಯತ್ನಿಸುತ್ತಿದ್ದು, ಕೂಡಲೇ ಪೊಲೀಸ್ ದೂರು ದಾಖಲಿಸುವುದರ ಜೊತೆಗೆ ಅರಣ್ಯ ಅಪರಾಧ ಕಾಯಿದೆಯಡಿಯೂ ಪ್ರಕರಣ ದಾಖಲಿಸುವಂತೆ ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಸಚಿವರು, ತುಮಕೂರು ಬಯಲು ಸೀಮೆ ಅರಣ್ಯ ಪ್ರದೇಶದಲ್ಲಿ ಒತ್ತುವರಿ ಆಗಿದ್ದು, ಜೊತೆಗೆ ಕೆಲವರು ನಕಲಿ ದಾಖಲೆ ಸೃಷ್ಟಿಸಿ ಅರಣ್ಯದ ಮೇಲೆ ಹಕ್ಕು ಚಲಾಯಿಸುತ್ತಿದ್ದರೆ, ಇನ್ನು ಕೆಲವು ಕಡೆ ಅಕ್ರಮ ಮಂಜೂರಾತಿಯಾಗಿದೆ. ಈ ಬಗ್ಗೆ ಅರಣ್ಯಾಧಿಕಾರಿಗಳು ಯಾವುದೇ

ಒತ್ತಡಕ್ಕೆ ಮಣಿಯದೆ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ತುಮಕೂರು ಜಿಲ್ಲೆಯ ೫೦ಕ್ಕೂ ಹೆಚ್ಚು ಗ್ರಾಮಗಳಲ್ಲಿ ಚಿರತೆ-ಮಾನವ ಸಂಘರ್ಷವಿದ್ದು ಶೀಘ್ರವಾಗಿ ೩೧ ಹೊಸ ಬೋನುಗಳನ್ನು ಖರೀದಿಸಲು ಸಚಿವರು ಸಮ್ಮತಿ ಸೂಚಿಸಿದರು. ಹಾಗೆಯೇ ತಿಪಟೂರಿನಲ್ಲಿ ಕಮಾಂಡ್ ಸೆಂಟರ್ ತೆರೆಯಲು ಕ್ರಮ ವಹಿಸುವಂತೆಯೂ ತಿಳಿಸಿದ್ದಾರೆ.

<><><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗಾಗಿ ಆಯೋಗವು ಸಿದ್ಧತೆ ನಡೆಸಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಸಹ ಆರಂಭವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಉಪಚುನಾವಣೆಯ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ೨೦೨೬ರ ಜನವರಿ ೩ ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು. ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಹಕ್ಕು ಆಕ್ಷೇಪಣೆಗಳಿದ್ದಲ್ಲಿ ಜನವರಿ ೨೪ ರೊಳಗೆ ಸಲ್ಲಿಸಬೇಕು. ಅಂತಿಮ ಮತದಾರರ ಪಟ್ಟಿಯನ್ನು ೨೦೨೬ ರ ಫೆಬ್ರವರಿ ೧೪ ರಂದು ಪ್ರಕಟಿಸಲಾಗುವುದು ಎಂದು ಮಾಹಿತಿ ನೀಡಿದರು.

<><><><>

ತುಮಕೂರು ನಗರದ ಗಾಜಿನ ಮನೆಯಲ್ಲಿ ಇದೇ ೨೯ ಹಾಗೂ ೩೦ರಂದು ೧೭ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ವಿಜೃಂಭಣೆಯಿಂದ ನಡೆಸಲು ಸಕಲ ಸಿದ್ಧತೆಗಳು ನಡೆದಿವೆ ಎಂದು ಜಿಲ್ಲಾಧಿಕಾರಿ ಹಾಗೂ ಸಮ್ಮೇಳನದ ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಶುಭ ಕಲ್ಯಾಣ್ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೧೭ನೇ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ಡಾ.ಕರೀಗೌಡ ಬೀಚನಹಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ. ಟೌನ್ ಹಾಲ್ ನಿಂದ ಗಾಜಿನಮನೆವರೆಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ ನಡೆಯಲಿದೆ ಎಂದರು. ಗೃಹ ಸಚಿವ ಡಾ. ಜಿ.ಪರಮೇಶ್ವರ್, ನಾಡಿದ್ದು ಗಾಜಿನ ಮನೆಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದು, ಶಾಸಕ ಟಿ.ಬಿ.ಜಯಚಂದ್ರ, ಸಮ್ಮೇಳನದ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಿದ್ದಾರೆ.

<><><><>

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಇಂದು ೯ನೇ ಕೃಷಿ ಸಂತೆ ಕಾರ್ಯಕ್ರಮವನ್ನು ಆಯೋಜಿಸಿದೆ. ಇದು ಬೆಳಗ್ಗೆ ಆರಂಭವಾಗಿದ್ದು, ಸಂಜೆ ೪ರವರೆಗೆ ನಡೆಯಲಿದೆ. ಇನ್ನು 'ರೈತ ದಿನಾಚರಣೆ' ಕಾರ್ಯಕ್ರಮವನ್ನು ನಗರದ ಜಿಕೆವಿಕೆ ಆವರಣದಲ್ಲಿರುವ ಡಾ.ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಸಮಾವೇಶ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ. ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಸಚಿವ ಕೃಷ್ಣ ಬೈರೇಗೌಡ, ಕುಲಪತಿ ಡಾ.ಎಸ್.ವಿ.ಸುರೇಶ, ಶಾಸಕ ಶರತ್ ಬಚ್ಚೇಗೌಡ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ. ಪ್ರಚಲಿತ ಕೃಷಿ ವಿಷಯಗಳ ಕುರಿತು ತಜ್ಞರು ಹಾಗೂ ಪ್ರಗತಿಪರ ರೈತರೊಂದಿಗೆ ಚರ್ಚೆ-ಸಂವಾದ ಕಾರ್ಯಕ್ರಮ ನಡೆಯಲಿದೆ. ಇದೇ ಸಮಯದಲ್ಲಿ ರಾಜ್ಯದ ೭ ಜಿಲ್ಲೆಗಳ

ಪ್ರಗತಿಪರ ರೈತರನ್ನು ಗುರುತಿಸಿ ಸನ್ಮಾನಿಸಲಾಗುವುದು. ಅಲ್ಲದೆ ಕೃಷಿ ಕ್ಷೇತ್ರದ ಹೊಸ ಸಂಶೋಧನೆಗಳು, ತಾಂತ್ರಿಕ ಪ್ರಗತಿಗಳು ಮತ್ತು ರೈತ ಸ್ನೇಹಿ ಯೋಜನೆಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲಾಗುವುದು.

<><><><>

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ನವದೆಹಲಿಯ ಇಂದಿರಾಭವನದಲ್ಲಿರುವ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿ - ಸಿಡಬ್ಲ್ಯುಸಿ ಸಭೆ ನಡೆಯಿತು. ಸಭೆಯಲ್ಲಿ ಮಲ್ಲಿಕಾರ್ಜುನ ಖರ್ಗೆ, ಗ್ರಾಮೀಣ ಭಾಗದ ಬಡವರ ಜೀವನಾಡಿಯಾಗಿರುವ ಮಗ್ರೇಗಾ ಯೋಜನೆ ಬಲಪಡಿಸಲು ಮತ್ತು ಅದನ್ನು ಸ್ಥಗಿತಗೊಳಿಸಿದ ಪ್ರಕ್ರಿಯೆಯನ್ನು ವಿರೋಧಿಸಿ ರಾಷ್ಟ್ರಮಟ್ಟದ ನರೇಗಾ ಕ್ರಿಯಾಯೋಜನೆ ರೂಪಿಸಲು ಕರೆ ನೀಡಿದರು. ಸಭೆಯು ಕೇಂದ್ರ ಸರ್ಕಾರದ ಇತ್ತೀಚಿನ ನೀತಿಗಳ ವಿರುದ್ಧ ಧ್ವನಿ ಎತ್ತುವ ಕಾರ್ಯತಂತ್ರ, ಮುಂಬರುವ ವಿವಿಧ ರಾಜ್ಯಗಳ ಚುನಾವಣೆಗಳನ್ನು ಎದುರಿಸಲು ಪಕ್ಷವನ್ನು ಸಜ್ಜುಗೊಳಿಸುವುದು ಹಾಗೂ ವಿವಿಧ ರಾಜ್ಯಗಳಲ್ಲಿ ನಡೆಸಲಾಗುತ್ತಿರುವ ಮತದಾರರ ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ವಿವಿಧ ವಿಷಯಗಳ ಮೇಲೆ ಕೇಂದ್ರೀಕೃತವಾಗಿತ್ತು ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಸಭೆಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಪಕ್ಷದ ಹಿರಿಯ ಮುಖಂಡ ಶಶಿತರೂರ್ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡಿದ್ದರು.

<><><><>

ಮೈಸೂರು ಅರಮನೆ ಮುಂಭಾಗದಲ್ಲಿ ಸಂಭವಿಸಿದ ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟ ಪ್ರಕರಣದಲ್ಲಿ ಸಾವಿನ ಸಂಖ್ಯೆ ಮೂರಕ್ಕೆ ಏರಿಕೆಯಾಗಿದೆ. ಸ್ಫೋಟದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಬೆಂಗಳೂರಿನ ಮಹಿಳೆಯೊಬ್ಬರು ಚಿಕಿತ್ಸೆ ಫಲಕಾರಿಯಾಗದೆ ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಕಳೆದ ರಾತ್ರಿ ಮೃತಪಟ್ಟಿದ್ದಾರೆ. ಅರಮನೆ ಮುಂಭಾಗದಲ್ಲಿ ಬಲೂನ್ ಮಾರಾಟ ನಡೆಯುತ್ತಿದ್ದ ವೇಳೆ ಹೀಲಿಯಂ ಗ್ಯಾಸ್ ಸಿಲಿಂಡರ್ ಏಕಾಏಕಿ ಸ್ಫೋಟಗೊಂಡಿತ್ತು. ಈ ಸ್ಫೋಟ ಪ್ರಕರಣದಲ್ಲಿ ಇದುವರೆಗೆ ಮೂವರು ಮೃತಪಟ್ಟಿದ್ದು, ಇನ್ನೂ ಕೆಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆ ಸಂಬಂಧ ಪೊಲೀಸ್ ಇಲಾಖೆ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದೆ.

<><><><>

ಹುಬ್ಬಳ್ಳಿ ಜಿಲ್ಲೆಯ ಇನಾಮ್ ವೀರ್ ಪುರ ಗ್ರಾಮದಲ್ಲಿ ನಡೆದ ಗರ್ಭಿಣಿ ಮಹಿಳೆಯ ಮರ್ಯಾದಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಉಸ್ತುವಾರಿ ಮತ್ತು ಕಾರ್ಮಿಕ ಸಚಿವ ಸಂತೋಷ್ ಲಾಡ್ ಇಂದು ಘಟನೆ ನಡೆದ ಗ್ರಾಮಕ್ಕೆ ಭೇಟಿ ನೀಡಿ, ಸ್ಥಳೀಯ ಅಧಿಕಾರಿಗಳಿಂದ ಪ್ರಕರಣದ ಸಂಪೂರ್ಣ ವಿವರ ಪಡೆದುಕೊಂಡರು. ಘಟನೆಯಲ್ಲಿ ಮೃತಪಟ್ಟ ಮಾನ್ಯಾಪಾಟೀಲ್ ಅವರ ಪತಿ ವಿವೇಕಾನಂದ್ ದೊಡ್ಡಮನಿ ಮತ್ತು ಅವರ ಕುಟುಂಬ ಸದಸ್ಯರನ್ನು ಭೇಟಿ ಮಾಡಿದ ಸಚಿವರು, ಸರ್ಕಾರ ಸಂತ್ರಸ್ತರ ಪರವಾಗಿ ದೃಢವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದರು.

<><><><>

ಮಹಾತ್ಮ ಗಾಂಧಿ ನರೇಗಾ ಬದಲಾಗಿ ವಿಕಸಿತಭಾರತ ಜಿ ರಾಮ್ ಜಿ ಯೋಜನೆಯಡಿಯಲ್ಲಿ ವಿಜಯಪುರ ಜಿಲ್ಲೆಯ ನಿಡಗುಂದಿ ತಾಲ್ಲೂಕಿನ ಚಿಮ್ಮಲಗಿ ಗ್ರಾಮ ಪಂಚಾಯತಿಯಲ್ಲಿ ವಿವಿಧ ಕಾಮಗಾರಿಗಳು ನಡೆಯುತ್ತಲಿವೆ.

ಯೋಜನೆಯ ಫಲಾನುಭವಿ ಭುವನೇಶ್ವರಿ ಮಾತನಾಡಿ ವಿಕಸಿತಭಾರತ ಜಿ ರಾಮ್ ಜಿ ಯಿಂದ ೨೫ ದಿನಗಳ ಕೂಲಿ ಸಿಕ್ಕು ಹೆಚ್ಚಿನ ಹಣವೂ ಸಿಗಲಿದೆ ಎಂದಿದ್ದಾರೆ. ಹಿಂದಿದ್ದ ೧೦೦ ದಿನಗಳ ಬದಲಾಗಿ ಈಗ ೧೨೫ ದಿನಗಳು ಕೆಲಸ ಮಾಡುವ ಅವಕಾಶ ಸಿಕ್ಕಿದೆ. ಇದರಿಂದ ಆರ್ಥಿಕ ಪರಿಸ್ಥಿತಿ ಸುಧಾರಿಸಲಿದೆ. ಸ್ಥಳೀಯವಾಗಿ ಉದ್ಯೋಗ ದೊರೆಯುವುದರಿಂದ ಬೇರೆ ರಾಜ್ಯಕ್ಕೆ ಕಡೆಗೆ ದುಡಿಯಲು ಹೋಗುವುದು ತಪ್ಪುತ್ತದೆ ಎಂದು ವಿಜಯಪುರ ಜಿಲ್ಲೆಯ ಫಲಾನುಭವಿ ಬೋರಮ್ಮ ಬಸವರಾಜ ವಾಲಿಕಾರ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

**ಧ್ವನಿ : ಬೋರಮ್ಮ ಬಸವರಾಜು**

<><><><>

ವರ್ಷಾಂತ್ಯ ಮತ್ತು ಕ್ರಿಸ್‌ಮಸ್ ಹಬ್ಬದ ರಜೆ ಹಿನ್ನೆಲೆಯಲ್ಲಿ ಮಂಗಳೂರು ಸೇರಿದಂತೆ ಕರಾವಳಿಯ ಕಡಲ ತೀರ ಮತ್ತು ಧಾರ್ಮಿಕ ಕ್ಷೇತ್ರಗಳಿಗೆ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿದೆ. ಕಳೆದ ಕೆಲವು ದಿನಗಳಿಂದ ಮಂಗಳೂರಿನ ತಣ್ಣೀರು ಬಾವಿ, ಪಣಂಬೂರು ಬೀಚ್ ಮತ್ತು ಸೋಮೇಶ್ವರ ಬೀಚ್‌ಗಳಲ್ಲಿ ಜನಸಾಗರ ಕಂಡುಬರುತ್ತಿದೆ. ಮತ್ತೊಂದೆಡೆ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನ, ಧರ್ಮಸ್ಥಳದ ಮಂಜುನಾಥ ದೇವಸ್ಥಾನ, ಮಂಗಳೂರಿನ ಮಂಗಳಾದೇವಿ, ಕದ್ರಿ ಮಂಜುನಾಥೇಶ್ವರ ದೇವಸ್ಥಾನಗಳಲ್ಲಿ ಭಕ್ತ ಸಮೂಹ ಕಂಡುಬರುತ್ತಿದೆ. ಮಂಗಳೂರಿನಲ್ಲಿ ಕರಾವಳಿ ಉತ್ಸವವೂ ಇದ್ದು ಈ ಉತ್ಸವದಲ್ಲಿ ಕೂಡ ಸಾವಿರಾರು ಸಂಖ್ಯೆಯಲ್ಲಿ ಪ್ರವಾಸಿಗರು ಪಾಲ್ಗೊಳ್ಳುತ್ತಿದ್ದಾರೆ.

<><><><>

೨೦೨೬ ರ ಹೊಸ ವರ್ಷದ ಆಚರಣೆಗೆ ಕೊಡಗು ಜಿಲ್ಲೆಗೆ ವಿವಿಧ ಕಡೆಗಳಿಂದ ದೇಶಿಯ ಹಾಗೂ ವಿದೇಶಿಯ ಪ್ರವಾಸಿಗರು, ಸಾರ್ವಜನಿಕರು ಆಗಮಿಸುತ್ತಿದ್ದಾರೆ. ಪ್ರವಾಸಿಗರು ತಂಗುವ ಹೋಂ-ಸ್ಟೇ, ರೆಸಾರ್ಟ್, ಹೋಟೆಲ್-ಲಾಡ್ಜ್‌ಗಳಲ್ಲಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಲು ಜಿಲ್ಲೆಯ ಎಲ್ಲಾ ರೆಸಾರ್ಟ್, ಹೋಟೆಲ್, ಹೋಂ-ಸ್ಟೇ ಮಾಲೀಕರು ಕ್ರಮವಹಿಸುವಂತೆ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>